ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 158 ಟಿಎನ್‌ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:29-12-2020.

**ಆದೇಶ**

ಭಾರತ ಸರ್ಕಾರದ ಕೇಂದ್ರ ಗೃಹ ಮಂತ್ರಾಲಯವು ಆದೇಶ ಸಂಖ್ಯೆ:40-3/2020-ಡಿಎಂ-I(ಎ), ದಿನಾಂಕ:25.11.2020ರಲ್ಲಿ ಕೋವಿಡ್-19 ಸೋಂಕು ನಿಗಾವಣೆ, ನಿಯಂತ್ರಣ ಮತ್ತು ಜಾಗ್ರತೆಗೆ ಸಂಬಂಧಿಸಿದ ಮಾರ್ಗಸೂಚಿಗಳನ್ನು ಹೊರಡಿಸಿದ್ದು, ಸದರಿ ಮಾರ್ಗಸೂಚಿಗಳು ದಿನಾಂಕ:31.12.2020ರ ವರೆಗೆ ಜಾರಿಯಲ್ಲಿರುತ್ತವೆ.

ಅದರನ್ವಯ, ರಾಜ್ಯ ಸರ್ಕಾರವು ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ:27.11.2020ರಲ್ಲಿ ಕೋವಿಡ್-19 ವೈರಾಣು ಸೋಂಕು ನಿಗಾವಣೆ, ನಿಯಂತ್ರಣ ಮತ್ತು ಜಾಗ್ರತೆಗೆ ಸಂಬಂಧಿಸಿದ ಮಾರ್ಗಸೂಚಿಗಳನ್ನು ಹೊರಡಿಸಿದ್ದು ಇವು ದಿನಾಂಕ:31.12.2020 ರವರೆಗೆ ಜಾರಿಯಲ್ಲಿರುತ್ತವೆ.

ಭಾರತ ಸರ್ಕಾರದ ಕೇಂದ್ರ ಗೃಹ ಮಂತ್ರಾಲಯವು ಆದೇಶ ಸಂಖ್ಯೆ:40-3/2020-ಡಿಎಂ-I(ಎ), ದಿನಾಂಕ:28.12.2020ರಲ್ಲಿ, ಈ ಹಿಂದೆ ದಿನಾಂಕ:25.11.2020ರಂದು ಹೊರಡಿಸಲಾಗಿದ್ದ ಆದೇಶ ಸಂಖ್ಯೆ:40-3/2020-ಡಿಎಂ-I(ಎ)ರಲ್ಲಿನ ಕೋವಿಡ್-19 ಸೋಂಕು ನಿಗಾವಣೆ, ನಿಯಂತ್ರಣ ಮತ್ತು ಜಾಗ್ರತೆಗೆ ಸಂಬಂಧಿಸಿದ ಮಾರ್ಗಸೂಚಿಗಳನ್ನು ದಿನಾಂಕ:31.01.2021ರವರೆಗೆ ಜಾರಿಗೊಳಿಸಿರುತ್ತದೆ.

ಆದ್ದರಿಂದ, ವಿಪತ್ತು ನಿರ್ವಹಣಾ ಅಧಿನಿಯಮ, 2005ರ ಸೆಕ್ಷನ್ (24)ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ರಾಜ್ಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷನಾಗಿ ಈ ಕೆಳಗೆ ಸಹಿ ಮಾಡಿರುವ ನಾನು ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ:27.11.2020ರಲ್ಲಿ ಹೊರಡಿಸಲಾಗಿದ್ದ ಕೋವಿಡ್-19 ವೈರಾಣು ಸೋಂಕು ನಿಗಾವಣೆ, ನಿಯಂತ್ರಣ ಮತ್ತು ಜಾಗ್ರತೆಗೆ ಸಂಬಂಧಿಸಿದ ಮಾರ್ಗಸೂಚಿಗಳನ್ನು ಯಥಾವತ್ತಾಗಿ **ದಿನಾಂಕ:31.01.2021ರವರೆಗೆ** ಜಾರಿಗೊಳಿಸಿ ಆದೇಶಿಸಿರುತ್ತೇನೆ. ಈ ಆದೇಶವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು, ಪೊಲೀಸ್ ಆಯುಕ್ತರು, ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಪೊಲೀಸ್ ವರಿಷ್ಠಾಧಿಕಾರಿಗಳು, ಇಲಾಖಾ ಮುಖ್ಯಸ್ಥರುಗಳು ಮತ್ತು ಪ್ರಾಧಿಕಾರಗಳು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸತಕ್ಕದ್ದು.

29/12/20
**(ಟಿ.ಎಂ. ವಿಜಯ್ ಭಾಸ್ಕರ್)**
ಮುಖ್ಯ ಕಾರ್ಯದರ್ಶಿ ಹಾಗೂ
ರಾಜ್ಯ ಕಾರ್ಯಕಾರಿ ಸಮಿತಿ ಅಧ್ಯಕ್ಷರು

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.